ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	145
ಸದಸ್ಯರ ಹೆಸರು	:	ಶ್ರೀ ಸಿ.ಎನ್.ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	:	14-02-2023
ಉತ್ತರಿಸಬೇಕಾದ ಸಚಿವರು	:	ನಗರಾಭಿವೃದ್ಧಿ ಸಚಿವರು

	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ಬರುವ ನಿವೇಶನಗಳಲ್ಲಿ ಮನೆ ಕಟ್ಟಿಕೊಳ್ಳುವ ಸಲುವಾಗಿ ವಿನ್ಯಾಸ ನಕ್ಷೆ ಅನುಮೋದನೆಗಾಗಿ, ನೀರಿನ ಸಂಪರ್ಕ/ಯು.ಜಿ.ಡಿ.ಗಾಗಿ ರಸ್ತೆ ಕಟ್ಟಿಂಗ್/ಮನೆ ಮತ್ತು ಖಾಲಿ ನಿವೇಶನಗಳ ತೆರಿಗೆ ಹಾಗೂ ಖಾಲಿ ನಿವೇಶನಗಳನ್ನು ಸ್ವಚ್ಛಗೊಳಿಸುವ ಸಲುವಾಗಿ ಈ ಹಿಂದೆ ನಿಗಧಿಪಡಿಸಿದ್ದ ಶುಲ್ಕವನ್ನು ಹೆಚ್ಚಿಗೆ ಮಾಡಲಾಗಿದೆಯೇ;	ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಚಾಲ್ತಿ ಸಾಲಿನ ಮಾರುಕಟ್ಟೆ ಮಾರ್ಗಸೂಚಿ ಬೆಲೆಗೆ ಅನುಗುಣವಾಗಿ ಆಸ್ತಿ ತೆರಿಗೆ ಜೋಡಣೆ ಮಾಡಲು ಮುನಿಸಿಪಲ್ ಕಾಯ್ದೆಗಳಿಗೆ ತಿದ್ದುಪಡಿ ತರಲಾಗಿದ್ದು, ಸದರಿ ನಿಯಮಗಳನ್ನು 2021-22ನೇ ಸಾಲಿನಿಂದ ಅನುಷ್ಠಾನಗೊಳಿಸಲಾಗಿದೆ. ಅದರಂತೆ ಪ್ರತಿ ವರ್ಷ ಆಸ್ತಿ ತೆರಿಗೆ ಪರಿಷ್ಕರಣೆ ಮಾಡಬೇಕಾಗಿರುತ್ತದೆ. ಸರ್ಕಾರದ ಆದೇಶ ಸಂಖ್ಯೆ: ನಅಇ 07 ಯುಡಬ್ಲ್ಯೂಎಸ್ 2011, ಬೆಂಗಳೂರು, ದಿ:20.07:2011 ರಂತೆ ನೀರಿನ ದರಗಳನ್ನು ಪ್ರತಿ ಮೂರು ವರ್ಷಗಳಿಗೊಮ್ಮೆ ಪರಿಷ್ಕರಿಸಬೇಕಾಗಿರುತ್ತದೆ. ಕರ್ನಾಟಕ ಮಹಾನಗರ ಪಾಲಿಕೆಗಳ ಅಧಿನಿಯಮ 1976ರಲ್ಲಿ ಅವಕಾಶದಂತೆ ಹಾಗೂ ಸಂಬಂಧಿಸಿದ ಸರ್ಕಾರದ ಆದೇಶ/ಸುತ್ತೋಲೆಗಳ ಸೂಚನೆ/ ಷರತ್ತುಗಳಿಗೊಳಪಟ್ಟು ಬೈ-ಲಾ ಗಳನ್ನು ರಚಿಸಿಕೊಂಡು ಕಟ್ಟಡ ಪರವಾನಿಗೆ ಹಾಗೂ ಇತರೆ ಶುಲ್ಕಗಳನ್ನು/ದರಗಳನ್ನು ಪರಿಷ್ಕರಿಸಲು ಅವಕಾಶವಿರುತ್ತದೆ. ಕಾಯ್ದೆಯಲ್ಲಿನ ಅವಕಾಶದಂತೆ ತೆರಿಗೆ/ಶುಲ್ಕಗಳನ್ನು ಪರಿಷ್ಕರಿಸಲಾಗುತ್ತಿದೆ.
ಆ)	ಹಾಗಿದ್ದಲ್ಲಿ ಎಂದಿನಿಂದ ಈ ದರಗಳನ್ನು ಹೆಚ್ಚಿಸಲಾಗಿದೆ ಈ ಹಿಂದೆ ಇದ್ದ ಶುಲ್ಕವೆಷ್ಟು ಹಾಲಿ ಹೆಚ್ಚಿಸಿರುವ ಶುಲ್ಕವೆಷ್ಟು; ಸಂಪೂರ್ಣ ಮಾಹಿತಿ ನೀಡುವುದು;	
ಇ)	ಈ ರೀತಿ ಅವೈಜ್ಞಾನಿಕವಾಗಿ ಇವುಗಳ ದರಗಳನ್ನು ಹೆಚ್ಚಿಗೆ ಮಾಡಿದ್ದರಿಂದ ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು. ಕಾಯ್ದೆಯನ್ವಯ ತೆರಿಗೆ/ದರಗಳನ್ನು ಪರಿಷ್ಕರಿಸಲಾಗುತ್ತಿದ್ದು, ಅವೈಜ್ಞಾನಿಕವಾಗಿ ಇವುಗಳ ದರಗಳನ್ನು ಹೆಚ್ಚಿಗೆ ಮಾಡಿರುವುದಿಲ್ಲ.
ಈ)	ಬಂದಿದಲ್ಲಿ ಇವುಗಳ ಶುಲ್ಕಗಳನ್ನು ಕಡಿಮೆ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು? (ವಿವರ ನೀಡುವುದು)	ಶುಲ್ಕಗಳನ್ನು ಕಡಿಮೆ ಮಾಡುವ ಕುರಿತು ಸರ್ಕಾರದ ಮುಂದೆ ಪ್ರಸ್ತುತ ಯಾವುದೇ ಪ್ರಸ್ತಾವನೆ ಇರುವುದಿಲ್ಲ.

ಸಂಖ್ಯೆ: ನಅಇ 34 ಎಂಎನ್ಇ 2023(ಇ)

(ಬಿ.ಎ.ಬಸವರಾಜ)
ನಗರಾಭಿವೃದ್ಧಿ ಸಚಿವರು

(ಬಿ.ಎ. ಬಸವರಾಜ)
ನಗರಾಭಿವೃದ್ಧಿ ಸಚಿವರು